**ಪಶ್ಚಿಮ ವಲಯ ವ್ಯಾಪ್ತಿಯ, ಮಲ್ಲೇಶ್ವರಂ ಉಪವಿಭಾಗದ ಕಾಡುಮಲ್ಲೇಶ್ವರ ವಾರ್ಡ್–65ರಲ್ಲಿ ಆನ್‌ಲೈನ್ (Zoom App) ಮೂಲಕ ದಿನಾಂಕ: 20-02-2021 ರಂದು, ನಡೆದ ವಾರ್ಡ್ ಸಮಿತಿ ಸಭೆಯ**

## ಸಭಾ ನಡವಳಿಗಳು.

ವಾರ್ಡ್ ಸಂಖ್ಯೆ-65 ಕಾಡುಮಲ್ಲೇಶ್ವರ — ಸಮಯ ಬೆಳಿಗ್ಗೆ 11:30 ಘಂಟೆಗೆ

ದಿನಾಂಕ: 20-02-2021 ರಂದು ವಾರ್ಡ್ ಸಂಖ್ಯೆ:65ರ ಫೆಬ್ರವರಿ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಆನ್‌ಲೈನ್ (Zoom App) ಮೂಲಕ ಭಾಗವಹಿಸಿದ್ದರು. ವಾರ್ಡ್ ಸಂಖ್ಯೆ: 65ರ ಸಹಾಯಕ ಅಭಿಯಂತರರು ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತವನ್ನು ಕೋರಿದರು ಹಾಗೂ ಸದಸ್ಯರುಗಳೆಲ್ಲರ ಕಿರು ವಿವರ ತಿಳಿಸಿ. ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಕೊಂಡು ಸಭೆ ನಡೆಸಲು ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ಸಂಚಾರಿ ಪೊಲೀಸ್ ಅಧಿಕಾರಿಗಳು ಸಭೆಯ ಹಾಜರಿದ್ದು, ಸಾರ್ವಜನಿಕರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸುತ್ತಾ, ಬಿಬಿಎಂಪಿ ಅಧಿಕಾರಿಗಳ ಜೊತೆಯಲ್ಲಿ ಆಕ್ರಮಿತ ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಲಾಗಿ ಸಭೆಗೆ ತಿಳಿಸಿರುತ್ತಾರೆ. ಹಾಗೂ ಬಿಬಿಎಂಪಿ ಅಧಿಕಾರಿಗಳ ಜೊತೆಯಲ್ಲಿ ಮಾರ್ಗೋಸಾ ರಸ್ತೆ ಪರಿವೀಕ್ಷಣೆ ಮಾಡುವುದಾಗಿ ಸಭೆಗೆ ತಿಳಿಸಿರುತ್ತಾರೆ.
- ಬೃಹತ್ ನೀರು ಕಾಲುವೆಗಳ ಅಧಿಕಾರಿಗಳು ಸಭೆಯ ಹಾಜರಿದ್ದು, 12ನೇ ಅಡ್ಡರಸ್ತೆಯಲ್ಲಿ ನಡೆಯುತ್ತಿರುವ ಕಾಲುವೆ ಕಾಮಗಾರಿಯು ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಸಾರ್ವಜನಿಕರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸುತ್ತಾ, ಅತೀ ಶೀಘ್ರವಾಗಿ ಪೂರ್ಣಗೊಳಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.
- ಬೆಂಗಳೂರು ನೀರು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಇಂಜಿನಿಯರ್ ರವರು ವಾರ್ಡ್–65ರಲ್ಲಿ ನಡೆಯುತ್ತಿರುವ ಕಾಮಗಾರಿಗಳ ಬಗ್ಗೆ ಸಾರ್ವಜನಿಕರು ನಿಗಧಿತ ಸಮಯದಲ್ಲಿ ಮುಗಿಸುವಂತೆ ಹಾಗೂ ಕಾಮಗಾರಿಗಳ ಅವಶೇಷಗಳನ್ನು (Debries) ತೆಗೆಯಬೇಕೆಂದು ಕೋರಿರುತ್ತಾರೆ. ಅದಕ್ಕೆ ಇಲಾಖೆಯ ಅಧಿಕಾರಿಗಳು ಈ ತಿಂಗಳಿನೊಳಗಾಗಿ ಪೂರ್ಣಗೊಳಿಸುವುದಾಗಿ ತಿಳಿಸಿದರು.
- ವಿದ್ಯುತ್ ಇಲಾಖೆಯವರು ಸಭೆಯ ಹಾಜರಿದ್ದು, ಯು.ಜಿ ಕೇಬಲ್ ಹಾಗೂ ಎ.ಜಿ ಕೇಬಲ್ ಬಗ್ಗೆ ಸಾರ್ವಜನಿಕರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸುತ್ತಾ, ಕಾಮಗಾರಿಗಳನ್ನು ಶೀಘ್ರವಾಗಿ ಮುಗಿಸುವುದಾಗಿ. ಸಭೆಗೆ ತಿಳಿಸಿರುತ್ತಾರೆ.

- ಮಾರ್ಗೋಸಾ ರಸ್ತೆಗಳಲ್ಲಿ ನಡೆಯುತ್ತಿರುವ ಟೆಂಡರ್ ಶ್ಯೂರ್ ಕಾಮಗಾರಿಯ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದು, ಕಾಮಗಾರಿಯ ಬಗ್ಗೆ ವಿವರವಾಗಿ ತಿಳಿಸಿ, ಮುಂದಿನ ದಿನಗಳಲ್ಲಿ ಸಾರ್ವಜನಿಕರು, ಬಿಬಿಎಂಪಿ ಅಧಿಕಾರಿಗಗಳು ಹಾಗೂ ಸಂಚಾರಿ ಪೊಲೀಸ್ ಇಲಾಖಾ ಅಧಿಕಾರಿಗಳು ಪರಿವೀಕ್ಷಿಸಲು ಸಭೆಗೆ ತಿಳಿಸಿರುತ್ತಾರೆ.
- 11ನೇ ಮುಖ್ಯರಸ್ತೆ ಮತ್ತು 8ನೇ ಮುಖ್ಯರಸ್ತೆಯಲ್ಲಿ ಮೇಜರ್ ರಸ್ತೆ ಪಶ್ಚಿಮ ವಲಯದಿಂದ ಕಾಮಗಾರಿಗಳು ನಡೆಯುತ್ತಿದ್ದು, ಕಾಮಗಾರಿಗಳ ಬಗ್ಗೆ ಸಾರ್ವಜನಿಕರಿಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಕಾಮಗಾರಿಯ ಬಗ್ಗೆ ತಿಳಿಸುತ್ತಾ ಹಾಗೂ ಪಾದಚಾರಿ ಮಾರ್ಗಗಳ ಬಗ್ಗೆ ಸಾರ್ವಜನಿಕರು ಕೇಳಿದ ಪ್ರಶ್ನೆಗಳಿಗೆ ಮುಂದಿನ ದಿನಗಳಲ್ಲಿ ಸಾರ್ವಜನಿಕರೊಂದಿಗೆ ಪರಿವೀಕ್ಷಿಸಲು ಸಭೆಗೆ ತಿಳಿಸಿರುತ್ತಾರೆ.
- ವಾರ್ಡ್-65 ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ಹಾಜರಿದ್ದು, ವಾರ್ಡಿನಲ್ಲಿ ಇದುವರೆವಿಗೂ 1215 ಕೋವಿಡ್-19 ಸೋಂಕಿಗೆ ಒಳಪಟ್ಟಿರುತ್ತಾರೆ. ಹಾಗೂ ಕೋವಿಡ್-19 ಸೋಂಕಿನಿಂದ 19 ಜನ ಮರಣ ಹೊಂದಿದ್ದು, 1196 ಜನ ಕೋವಿಡ್-19 ಸೋಂಕಿನಿಂದ ಗುಣಮುಖರಾಗಿ ಮನೆಗೆ ತೆರಳಿರುತ್ತಾರೆ. 2905 ಜನ ಕೋವಿಡ್-19 ಸೋಂಕಿನ ಪ್ರಾಥಮಿಕ ಸಂಪರ್ಕ ಇರುವವರು ಮತ್ತು 1728 ದ್ವಿತೀಯ ಸಂಪರ್ಕದಲ್ಲಿರುವವರನ್ನು ಪತ್ತೆ ಮಾಡಲಾಗಿರುತ್ತದೆ. ಮತ್ತು 619 ಜನ ಹೋ ಕ್ವಾರೆಂಟೈನ್‌ನಲ್ಲಿ ಇರುವುದಾಗಿ ಹಾಗೂ ಆರೋಗ್ಯ ವೈದ್ಯಾಧಿಕಾರಿಗಳು ಮನೆ ಮನೆಗೆ ಔಷಧಿ ಸಿಂಪಡಣೆ ಮಾಡಲಾಗುತ್ತದೆ ಎಂದು ತಿಳಿಸಿದರು.
- ಅರಣ್ಯ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು, 4ನೇ ಮತ್ತು 6ನೇ ಮುಖ್ಯರಸ್ತೆಯಲ್ಲಿ ಮರಗಳ ಕೊಂಬೆಗಳನ್ನು ತೆರವುಗೊಳಿಸಲು ಸಾರ್ವಜನಿಕರು ತಿಳಿಸಿರುತ್ತಾರೆ. ಮತ್ತು 4ನೇ ಮತ್ತು 6ನೇ ಮುಖ್ಯರಸ್ತೆಯಲ್ಲಿ ಮಂಗಗಳ ಕಾಟವನ್ನು ತಪ್ಪಿಸುವ ಬಗ್ಗೆ ಗಮನ ಹರಿಸುವಂತೆ ಕೋರಿರುತ್ತಾರೆ. ಅದಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸಿರುತ್ತಾರೆ.

- ವಾರ್ಡ್-65ರ ಸಭೆಗೆ ಸಹಾಯಕ ಅಭಿಯಂತರರು ಬೇರೆ ಇಲಾಖೆಯವರು ಕಾಮಗಾರಿಗಳನ್ನು ಮುಂದಿನ ತಿಂಗಳೊಳಗಾಗಿ ಪೂರ್ಣಗೊಳಿಸುವುದಾಗಿ ಹಾಗೂ ಬಿಬಿಎಂಪಿ ಇಲಾಖೆಯಿಂದ ರಸ್ತೆಗಳಿಗೆ ಡಾಂಬರ್ ಹಾಕುವುದು, ಪಾದಚಾರಿ ಮಾರ್ಗಗಳನ್ನು ಅಭಿವೃದ್ಧಿ ಪಡಿಸುವುದಾಗಿ ತಿಳಿಸಿರುತ್ತಾರೆ. ಮತ್ತು ಮುಂದಿನ ಆಯವ್ಯಯ ಪಟ್ಟಿಯಲ್ಲಿ ವಾರ್ಡಿನ ಅಭಿವೃದ್ಧಿಗಾಗಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಹಾಗೂ ಸಾರ್ವಜನಿಕರಿಂದ ಸಲಹೆ, ಸೂಚನೆಗಳನ್ನು ನೀಡಬೇಕೆಂದು ಸಭೆಯಲ್ಲಿ ಕೋರಿರುತ್ತಾರೆ.

ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಕಾರ್ಯದರ್ಶಿಯವರು ವಂದಾನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ,
20/?
ಸಹಾಯಕ ಅಭಿಯಂತರರು, ವಾರ್ಡ್-65
ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ